**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**31.03.2025  07.35 a.m.**
**<><><><>**

ಮುಖ್ಯಾಂಶಗಳು

1. ಇಂದು ರಂಜಾನ್ ಹಬ್ಬ : ರಾಷ್ಟ್ರಪತಿ, ಉಪರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ಶುಭಾಶಯ
2. ಛತ್ತಿಸ್‌ಗಢದಲ್ಲಿ ೩೩ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಚಾಲನೆ
3. ನಾಳೆಯಿಂದ ವಿಕಸಿತ ಭಾರತ ಯುವ ಸಂಸತ್
4. ಏಪ್ರಿಲ್ ೩೦ ರಂದು ಯಾತ್ರಾರ್ಥಿಗಳ ಪ್ರವೇಶಕ್ಕೆ ಗಂಗೋತ್ರಿ, ಯಮುನೋತ್ರಿ ಧಾಮ ಮುಕ್ತ
5. ಐಪಿಎಲ್ ಟಿ-೨೦ ಕ್ರಿಕೆಟ್ : ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡಕ್ಕೆ ೬ ರನ್‌ಗಳ ರೋಚಕ ಗೆಲುವು

<><><><>

ಇಂದು ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮುಸ್ಲಿಂ ಸಮುದಾಯಕ್ಕೆ ಶುಭಾಶಯಗಳನ್ನು ಕೋರಿದ್ದಾರೆ. ಈದ್-ಉಲ್-ಫಿತರ್, ರಂಜಾನ್ ತಿಂಗಳಲ್ಲಿ ಉಪವಾಸ ಮತ್ತು ಪ್ರಾರ್ಥನೆಯ ಸಂಪನ್ನವನ್ನು ಸೂಚಿಸುತ್ತದೆ. ಈ ಹಬ್ಬವು ಸಹೋದರತ್ವ, ಸಹಕಾರ ಮತ್ತು ಸಹಾನುಭೂತಿಯ ಮನೋಭಾವವನ್ನು ಬಲಪಡಿಸುತ್ತದೆ. ಈ ಹಬ್ಬವು ಸಾಮಾಜಿಕ ಬಾಂಧವ್ಯಗಳನ್ನು ಬೆಳೆಸಲು ಸಹಾಯ ಮಾಡುತ್ತದೆ. ಸಾಮರಸ್ಯ, ಶಾಂತಿಯುತ ಮತ್ತು ಸಮೃದ್ಧ ಸಮಾಜವನ್ನು ಸೃಷ್ಟಿಸಲು ಪ್ರೋತ್ಸಾಹಿಸುತ್ತದೆ ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಈ ಹಬ್ಬವು ಎಲ್ಲರಿಗೂ ಶಾಂತಿ, ಪ್ರಗತಿ ಮತ್ತು ಸಂತೋಷವನ್ನು ತರಲಿ ಮತ್ತು ಸಕಾರಾತ್ಮಕ ಮನೋಭಾವದಿಂದ ಮುಂದುವರಿಯಲು ಶಕ್ತಿಯನ್ನು ನೀಡಲಿ ಎಂದು ರಾಷ್ಟ್ರಪತಿಗಳು ಆಶಿಸಿದರು. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಈದ್-ಉಲ್-ಫಿತರ್ ಹಬ್ಬದ ಶುಭಾಶಯ ಕೋರಿದ್ದಾರೆ. ಸಾಂಸ್ಕೃತಿಕ ವೈವಿಧ್ಯತೆ ಮತ್ತು ವ್ಯಕ್ತಿಗಳನ್ನು ಒಂದುಗೂಡಿಸುವ ಸಾಮಾನ್ಯ ಬಂಧಗಳಿಂದ ಪಡೆದ ಶಕ್ತಿಯ ಜ್ಞಾಪಕಾರ್ಥ ಹಬ್ಬ ಆಚರಿಸಲಾಗುತ್ತದೆ.  ಈ ಪವಿತ್ರ ದಿನದ ಸಾರವು

ಸರಳ ಆಚರಣೆಯನ್ನು ಮೀರಿ, ರಾಷ್ಟ್ರದ ವೈವಿಧ್ಯಮಯ ಪ್ರಜಾಪ್ರಭುತ್ವಕ್ಕೆ ಅಡಿಪಾಯವಾದ ಏಕತೆ, ಸಹಾನುಭೂತಿ ಮತ್ತು ಪರಸ್ಪರ ಗೌರವದ ಸಾಂವಿಧಾನಿಕ ಆದರ್ಶಗಳನ್ನು ಸಾಕಾರಗೊಳಿಸುತ್ತದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಹಬ್ಬದ ಚೈತನ್ಯವು ರಾಷ್ಟ್ರದ ಮುಂದಿನ ಹಾದಿಗೆ ಮಾರ್ಗದರ್ಶನ ನೀಡುವ ಮೌಲ್ಯಗಳಿಗೆ ಮತ್ತೊಮ್ಮೆ ಬದ್ಧರಾಗಲು ಮತ್ತು ಜನರನ್ನು ಒಂದು ಗಮನಾರ್ಹ, ಸ್ಥಿತಿಸ್ಥಾಪಕ ರಾಷ್ಟ್ರವಾಗಿ ಒಗ್ಗೂಡಿಸಲು ವ್ಯಕ್ತಿಗಳನ್ನು ಪ್ರೇರೇಪಿಸಲಿ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಎರಡು ದಿನಗಳು ಮುಂಬೈಗೆ ಭೇಟಿ ನೀಡದ್ದಾರೆ. ರಾಷ್ಟ್ರಪತಿಗಳು ಇಂದು ಸಂಜೆ ಮುಂಬೈ ತಲುಪಲಿದ್ದಾರೆ. ಅವರು ನಾಳೆ ಮುಂಬೈನಲ್ಲಿ ನಡೆಯಲಿರುವ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ನ ೯೦ನೇ ವಾರ್ಷಿಕೋತ್ಸವದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><><>

ಛತ್ತೀಸ್‌ಗಢದ ಬಿಲಾಸ್‌ಪುರದಲ್ಲಿ ನಿನ್ನೆ ಸುಮಾರು ೩೩ ಸಾವಿರದ ೭೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆಗೊಳಿಸಿದರು. ಛತ್ತೀಸ್‌ಗಢ ರಾಜ್ಯದಾದ್ಯಂತ ನಿರ್ಮಿಸಲಾಗಿರುವ ೧೩೦ ಪಿಎಂಶ್ರೀ ಶಾಲೆಗಳನ್ನು ಸಮರ್ಪಿಸಿದರು. ಪ್ರಧಾನಮಂತ್ರಿ ಗ್ರಾಮೀಣ ಆವಾಸ್ ಯೋಜನೆಯಡಿ ೩ ಲಕ್ಷ ಫಲಾನುಭವಿಗಳಿಗಾಗಿ ನಿರ್ಮಿಸಲಾದ ಮನೆಗಳ ಗೃಹಪ್ರವೇಶ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಸಾರ್ವಜನಿಕ ಸಮಾರಂಭ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಛತ್ತೀಸ್‌ಗಢದ ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಶಾಶ್ವತ ಶಾಂತಿಯ ಹೊಸ ಯುಗ ಆರಂಭವಾಗುತ್ತಿದೆ. ರಾಜ್ಯದ ಬುಡಕಟ್ಟು ಪ್ರದೇಶಗಳಲ್ಲಿ ರಸ್ತೆಗಳು, ವಿದ್ಯುತ್ ಸಂಪರ್ಕ ಮತ್ತು ಮೊಬೈಲ್ ಸಂಪರ್ಕದ ಜೊತೆಗೆ ಆರೋಗ್ಯ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)

<><><><>

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯವು ನಾಳೆಯಿಂದ ಏಪ್ರಿಲ್ ೩ ರವರೆಗೆ ವಿಕಸಿತ ಭಾರತ ಯುವ ಸಂಸತ್ತನ್ನು ಆಯೋಜಿಸಲಿದೆ. ಪ್ರತಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದಿಂದ ೭೫ ಸಾವಿರಕ್ಕೂ ಹೆಚ್ಚು ಯುವಕರು ಮೈ ಭಾರತ್ ಪೋರ್ಟಲ್ ಮೂಲಕ ತಮ್ಮ ವಿಡಿಯೋಗಳನ್ನು ಸಲ್ಲಿಸಿದ್ದಾರೆ. ಇದು ರಾಷ್ಟ್ರದ ಭವಿಷ್ಯವನ್ನು ರೂಪಿಸುವ ತಮ್ಮ ಉತ್ಸಾಹ ಮತ್ತು ಬದ್ಧತೆಯನ್ನು ಪ್ರದರ್ಶಿಸುತ್ತದೆ. ವಿಕಸಿತ ಭಾರತ್ ಯುವ ಸಂಸತ್ತನ್ನು ಜಿಲ್ಲಾಮಟ್ಟ, ರಾಜ್ಯಮಟ್ಟ, ರಾಷ್ಟ್ರಮಟ್ಟ ಹೀಗೆ ಮೂರು ಪ್ರಮುಖ ಹಂತಗಳಾಗಿ ರಚಿಸಲಾಗಿದೆ. ಈ ಉಪಕ್ರಮದ ಮೂಲಕ ಸೃಜಿಸುವ ವಿಚಾರಗಳು ಮತ್ತು ಚರ್ಚೆಗಳು ರಾಷ್ಟ್ರದಾದ್ಯಂತ ಪ್ರತಿಧ್ವನಿಸಲಿವೆ. ಈ ವಿಕಸಿತ ಭಾರತ ಅಭಿಯಾನವು ನೀತಿ ನಿರೂಪಣೆಯಲ್ಲಿ ಯುವಕರ  ತೊಡಗಿಸಿಕೊಳ್ಳುವಿಕೆ ಮತ್ತು ರಾಷ್ಟ್ರ ಪ್ರಗತಿಯ ಹೊಸ ಯುಗಕ್ಕೆ ದಾರಿ ಮಾಡಿಕೊಡಲಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

ಈ ವರ್ಷ ಏಪ್ರಿಲ್ ೩೦ ರಂದು ಅಕ್ಷಯ ತೃತೀಯ ಸಂದರ್ಭದಲ್ಲಿ ಬೆಳಗ್ಗೆ ೧೦:೩೦ಕ್ಕೆ ಉತ್ತರಾಖಂಡದ ಗಂಗೋತ್ರಿ ಧಾಮದ ಬಾಗಿಲು ತೆರೆಯಲಿದೆ. ಮುಖ್ವಾದಲ್ಲಿ ನಡೆದ ಸಭೆಯಲ್ಲಿ ಗಂಗೋತ್ರಿ ದೇವಾಲಯ ಸಮಿತಿಯು ಈ ನಿರ್ಧಾರವನ್ನು ತೆಗೆದುಕೊಂಡಿದೆ. ಯಮನೋತ್ರಿ ಧಾಮದ ಬಾಗಿಲುಗಳು ಸಹ ಅದೇ ದಿನ ತೆರೆಯಲಿವೆ. ಏಪ್ರಿಲ್ ೩ ರಂದು ಯಮುನಾ ಜಯಂತಿಯಂದು ಯಮನೋತ್ರಿ ದೇವಾಲಯ ಸಮಿತಿಯು ಯಮನೋತ್ರಿ ಧಾಮದ ಬಾಗಿಲು ತೆರೆಯುವ ಸಮಯವನ್ನು ಘೋಷಿಸಲಿದೆ. ಈ ಕುರಿತು ಮಾಹಿತಿ ನೀಡಿದ ಬದರಿನಾಥ-ಕೇದಾರನಾಥ ದೇವಾಲಯ ಸಮಿತಿಯ ಮಾಧ್ಯಮ ಉಸ್ತುವಾರಿ ಡಾ. ಹರೀಶ್ ಗೌರ್, ಬದರಿನಾಥ ಮತ್ತು ಕೇದಾರನಾಥ ಧಾಮಗಳ ಬಾಗಿಲು ತೆರೆಯುವ ದಿನಾಂಕ ಮತ್ತು ಸಮಯವನ್ನು ಈಗಾಗಲೇ ಘೋಷಿಸಲಾಗಿದೆ.  ಬದರಿನಾಥ ಧಾಮದ ಬಾಗಿಲುಗಳು ಮೇ ೪ ರಂದು ಬೆಳಗ್ಗೆ ೬ ಗಂಟೆಗೆ ಮತ್ತು ಕೇದಾರನಾಥ ಧಾಮದ ಬಾಗಿಲುಗಳು ಮೇ ೨ ರಂದು ಬೆಳಗ್ಗೆ ೭ ಗಂಟೆಗೆ ತೆರೆಯಲಿವೆ ಎಂದು ತಿಳಿಸಿದ್ದಾರೆ. ಚಾರ್ ಧಾಮ್ ಯಾತ್ರೆಗೆ ಈಗಾಗಲೇ ನೋಂದಣಿ ಆರಂಭವಾಗಿದೆ. ಈ ವರ್ಷ, ನೋಂದಣಿಗೆ ಆಧಾರ್ ದೃಢೀಕರಿಸಲಾಗುತ್ತದೆ. ಭಕ್ತರು ನೋಂದಣಿ ಸಮಯದಲ್ಲಿ ತಮ್ಮ ಆಧಾರ್ ಕಾರ್ಡ್ ವಿವರಗಳನ್ನು ಒದಗಿಸಬೇಕಾಗುತ್ತದೆ ಎಂದು ಉತ್ತರಾಖಂಡ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

<><><><>

ಮಣಿಪುರ, ಅರುಣಾಚಲ ಪ್ರದೇಶ ಮತ್ತು ನಾಗಾಲ್ಯಾಂಡ್‌ನ ಕೆಲವು ಭಾಗಗಳಲ್ಲಿ ಸಶಸ್ತ್ರ ಪಡೆಗಳ ವಿಶೇಷ ಅಧಿಕಾರ ಕಾಯ್ದೆ- ಂಈಖಕಂ ಅನ್ನು ನಾಳೆಯಿಂದ ಇನ್ನೂ ಆರು ತಿಂಗಳವರೆಗೆ ವಿಸ್ತರಿಸುವುದಾಗಿ ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಮಣಿಪುರದಲ್ಲಿ, ಇಂಫಾಲ್ ಪಶ್ಚಿಮ, ಇಂಫಾಲ್ ಪೂರ್ವ, ತೌಬಲ್, ಬಿಷ್ಣುಪುರ ಮತ್ತು ಕಾಕ್ಚಿಂಗ್ ಎಂಬ ಐದು ಜಿಲ್ಲೆಗಳ ೧೩ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿರುವ ಜಿಲ್ಲೆಗಳನ್ನು ಹೊರತುಪಡಿಸಿ, ಎಲ್ಲಾ ಜಿಲ್ಲೆಗಳಲ್ಲಿ ಂಈಖಕಂ ಮುಂದುವರಿಯುತ್ತದೆ. ೨೦೨೩ರ ಮೇ ಯಿಂದ ಮಣಿಪುರವು ಜನಾಂಗೀಯ ಹಿಂಸಾಚಾರವನ್ನು ಎದುರಿಸುತ್ತಿದೆ. ನಾಗಾಲ್ಯಾಂಡ್‌ನ ಎಂಟು ಜಿಲ್ಲೆಗಳು ಮತ್ತು ಇತರೆ ಐದು ಜಿಲ್ಲೆಗಳ ಕೆಲವು ಭಾಗಗಳಲ್ಲಿಯೂ ಕಾನೂನನ್ನು ವಿಸ್ತರಿಸಲಾಗಿದೆ. ಅರುಣಾಚಲ ಪ್ರದೇಶದಲ್ಲಿ, ಕೆಲವು ಜಿಲ್ಲೆಗಳಲ್ಲಿ ಂಈಖಕಂ ಅನ್ವಯಿಸುತ್ತದೆ.

<><><>

ಗುವಾಹಟಿಯ ಬರ್ಸಾಪುರ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡವು ೬ ರನ್‌ಗಳ ರೋಚಕ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ ರಾಯಲ್ಸ್, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೮೨ ರನ್ ಗಳಿಸಿದರು. ರಾಜಸ್ಥಾನ ರಾಯಲ್ಸ್ ಪರ ನಿತಿಶ್ ರಾಣಾ ಅತ್ಯಧಿಕ ೮೧ ರನ್ ಗಳಿಸಿದರು. ೧೮೩ ರನ್‌ಗಳ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೭೬ ರನ್ ಗಳಿಸಲಷ್ಟೇ ಶಕ್ತವಾಯಿತು. ೪ ಪ್ರಮುಖ ವಿಕೆಟ್‌ಗಳನ್ನು ಉರುಳಿಸಿದ ಹಸರಂಗ, ರಾಜಸ್ಥಾನ ರಾಯಲ್ಸ್ ಗೆಲುವಿಗೆ ಪ್ರಮುಖ ಪಾತ್ರ ವಹಿಸಿದರು. ನಿತಿಶ್ ರಾಣಾ ಪಂದ್ಯ ಶ್ರೇಷ್ಠ ಪುರಸ್ಕಾರಕ್ಕೆ ಭಾಜನರಾದರು. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯುವ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><><>

ಜೋರ್ಡಾನ್‌ನ ಅಮ್ಮನ್‌ನಲ್ಲಿ ನಿನ್ನೆ ನಡೆದ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಕುಸ್ತಿಯಲ್ಲಿ ಒಲಿಂಪಿಯನ್ ದೀಪಕ್ ಪುನಿಯಾ ಮತ್ತು ಉದಿತ್ ಬೆಳ್ಳಿ ಪದಕ ಗಳಿಸಿದ್ದಾರೆ. ಪುರುಷರ ಫ್ರೀಸ್ಟೈಲ್ ೯೨ ಕೆಜಿ ವಿಭಾಗದಲ್ಲಿ ದೀಪಕ್ ಪುನಿಯಾ ಬೆಳ್ಳಿ ಗೆದ್ದರೆ, ೬೧ ಕೆಜಿ ವಿಭಾಗದಲ್ಲಿ ಉದಿತ್ ಬೆಳ್ಳಿ ಪದಕ

ಗೆದ್ದರು.    ೧೨೫ ಕೆಜಿ ವಿಭಾಗದಲ್ಲಿ ದಿನೇಶ್, ತುರ್ಕಮೆನಿಸ್ತಾನದ ಝ್ಯೆಯಾ ಮುಹಮ್ಮೆಟ್ ಸಪರೋವ್ ಅವರನ್ನು ಸೋಲಿಸಿ ಕಂಚಿನ ಪದಕ ಗೆದ್ದರು. ಚಾಂಪಿಯನ್‌ಶಿಪ್‌ನಲ್ಲಿ ಒಂದು ಚಿನ್ನ, ಮೂರು ಬೆಳ್ಳಿ ಮತ್ತು ಆರು ಕಂಚಿನೊಂದಿಗೆ ಭಾರತ ಒಟ್ಟು ೧೦ ಪದಕಗಳನ್ನು ಗೆದ್ದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>